# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 140 | Pages. 2 | Date: 08-05-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 140 - ಪುಟಗಳು : 2 | 08-05-2026 | ಶುಕ್ರವಾರ | Ph: 8762954248 | ದರ : ₹1


# ಬಡತನ ಮೀರಿ ಶಿಕ್ಷಣದ ಶಿಖರಕ್ಕೇರಿದ ಗ್ರಾಮೀಣ ಪ್ರತಿಭೆ

## ಹಾಸನದ ತೇಜಸ್ವಿನಿಗೆ ಡಾಕ್ಟರೇಟ್ ಗೌರವ: ಗ್ರಾಮೀಣ ರಸ್ತೆಗಳ ಅಧ್ಯಯನಕ್ಕೆ ಪಿಹೆಚ್‌ಡಿ ಪದವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಿರಿಯ ವಯಸ್ಸಿನಲ್ಲೇ ಬೋಧನಾ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ, ಅಪ್ಪಟ ಗ್ರಾಮೀಣ ಪ್ರತಿಭೆ, ಬಡತನದ ಕುಟುಂಬದಲ್ಲಿ ಹುಟ್ಟಿ ಇಂದು ಪ್ರತಿಭಾ ಸಂಪನ್ನೆಯಾಗಿ ಹೊರ ಹೊಮ್ಮಿರುವ ಚನ್ನರಾಯಪಟ್ಟಣ ತಾಲೂಕಿನ ಮಂಡಲೀಕನಹಳ್ಳಿ ಗ್ರಾಮದ ತೇಜಸ್ವಿನಿ ಎಂ.ಎಸ್. ಅವರಿಗೆ ಡಾಕ್ಟರೇಟ್ ಪದವಿ ಲಭಿಸಿದೆ. ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾನಿಲಯದಲ್ಲಿ ಬುಧವಾರ ನಡೆದ 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಅಪಾರ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಮೇಡಂಗೆ ಪಿಹೆಚ್ ಡಿ ಪದವಿ ಪ್ರದಾನ ಮಾಡಲಾಯಿತು.

ರಾಜ್ಯದ ರಾಜ್ಯಪಾಲರು ಹಾಗೂ ಕುವೆಂಪು ವಿಶ್ವವಿದ್ಯಾನಿಲಯದ ಕುಲಾಧಿಪತಿಗಳೂ ಆಗಿರುವ ಥಾವರ್ ಚಂದ್ ಗೆಹ್ಲೋಟ್ ಅವರು ತೇಜಸ್ವಿನಿ ಅವರಿಗೆ ಡಾಕ್ಟರೇಟ್ ಪದವಿ ನೀಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್, ರಾಷ್ಟ್ರೀಯ ಶೈಕ್ಷಣಿಕ ತಂತ್ರಜ್ಞಾನ ಹಾಗೂ ರಾಷ್ಟ್ರೀಯ ಮಾನ್ಯತಾ ಮಂಡಳಿ ಅಧ್ಯಕ್ಷ ಪ್ರೊ. ಅನಿಲ್ ಡಿ. ಸಹಬುಧೆ, ಕುಲಪತಿ ಶರತ್ ಅನಂತಮೂರ್ತಿ ಸೇರಿದಂತೆ ಹಲವು ಗಣ್ಯರ ಸಮ್ಮುಖದಲ್ಲಿ ಹಾಜರಿದ್ದು, ಶುಭ ಹಾರೈಸಿದರು.

ಈ ಆನಂದದ ಕ್ಷಣವನ್ನು ಕಣ್ತುಂಬಿಕೊಂಡ ತೇಜಸ್ವಿನಿ ಹಾಗೂ ಅವರ ತಂದೆ-ತಾಯಿ, ಪತಿ ಮತ್ತು ಕುಟುಂಬದ ಸದಸ್ಯರು ಸಂಭ್ರಮಿಸಿ ಭಾವುಕರಾದರು.

ಪಿಹೆಚ್ ಡಿ ಪದವಿ ಸ್ವೀಕರಿಸಿದ ತೇಜಸ್ವಿನಿ ಎಂ.ಎಸ್. ಅವರು ಪ್ರಸ್ತುತ ಸಾಹಿತ್ಯ ಪ್ರಕಾಶನದ ಬೀಡು ಗದಗದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಕುವೆಂಪು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಪ್ರೊ.ಬಿ.ಜಯರಾಮ ಭಟ್ ಮಾರ್ಗದರ್ಶನದಲ್ಲಿ ಎ ಸ್ಟಡಿ



❝ ನನ್ನನ್ನು ಡಾ.ತೇಜಸ್ವಿನಿಯಾಗಿ ನೋಡಬೇಕೆಂದವರ ಹಂಬಲಿಸಿದವರ ಆಸೆ ಈಡೇರಿಸಿದ ಸಾರ್ಥಕ ಕ್ಷಣ, ವೈಯಕ್ತಿಕವಾಗಿ ತುಂಬಾ ಸಂತೋಷ ತರಿಸಿದೆ. ಇದಕ್ಕಾಗಿ ಸಹಕಾರ ನೀಡಿದ ನನ್ನ ಕುಟುಂಬದ ಎಲ್ಲ ಸದಸ್ಯರಿಗೆ, ಮಾರ್ಗದರ್ಶಕರಿಗೆ, ಸಹೋದ್ಯೋಗಿಗಳಿಗೆ ಧನ್ಯವಾದಗಳು.

– ಡಾ.ತೇಜಸ್ವಿನಿ, ಸಹಾಯಕ ಪ್ರಾಧ್ಯಾಪಕಿ

ಆಫ್ ರೋಡ್ ಟ್ರಾನ್ಸ್‌ಟೇಶನ್ ಇನ್ ಕರ್ನಾಟಕ - ವಿತ್ ಸ್ಪೆಷಲ್ ರೆಫ್ರೆನ್ಸ್ ಟು ಹಾಸನ್ ಡಿಸ್ಟ್ರಿಕ್ಟ್ ವಿಷಯದಲ್ಲಿ ಸಮಗ್ರ ಅಧ್ಯಯನ ನಡೆಸಿ, ವಿಶ್ವವಿದ್ಯಾಲಯಕ್ಕೆ ಪ್ರಬಂಧ ಸಲ್ಲಿಸಿದ್ದರು.

ತಮ್ಮ ಅಧ್ಯಯನದಲ್ಲಿ ಹಾಸನ ಜಿಲ್ಲೆಯ ಗ್ರಾಮೀಣ ಭಾಗದ ರಸ್ತೆಗಳ ಪರಿಸ್ಥಿತಿ ಹೇಗಿದೆ, ಗ್ರಾಮೀಣ ಭಾಗದ ರಸ್ತೆಗಳ ಸಂಪರ್ಕ ವ್ಯವಸ್ಥೆ ಹೇಗಿದೆ, ರಸ್ತೆಗಳಿಗೆ ಗ್ರಾಮೀಣ ಭಾಗದ ಜನರ ಜೀವನ ಮಟ್ಟ ಸುಧಾರಿಸಿದೆಯಾ, ರಸ್ತೆಗಳಿಂದ ಜನರ ಆರ್ಥಿಕ ಅಭಿವೃದ್ಧಿ ಆಗಿದೆಯಾ, ಹೀಗೆ ಹಲವು ಅಂಶಗಳನ್ನು ಆಧಾರವಾಗಿಟ್ಟುಕೊಂಡು ಗ್ರಾಮೀಣ ಭಾಗದ ಜನರ ಸಂದರ್ಶನ ಮಾಡಿ ಮಹಾ ಪ್ರಬಂಧ ಸಿದ್ಧ ಪಡಿಸಿದ್ದರು.

ಇದೀಗ ಮಹಾ ಪ್ರಬಂಧವನ್ನು ಪಿಹೆಚ್ ಡಿಗೆ ಅಂಗೀಕರಿಸಿರುವ ಕುವೆಂಪು ವಿವಿ, ಡಾಕ್ಟರೇಟ್ ನೀಡಿ ಗೌರವಿಸಿದೆ.

ಹಿನ್ನೆಲೆ: ತೇಜಸ್ವಿನಿ ಎಂ.ಎಸ್. ಅವರು ಚನ್ನರಾಯಪಟ್ಟಣ ತಾಲೂಕಿನ ಮಂಡಲೀಕನಹಳ್ಳಿ ಗ್ರಾಮದ ಶ್ರೀನಿವಾಸ್-ಯಶೋಧ ದಂಪತಿಯ ಸುಪುತ್ರಿ. ಬಡತನದ ಕುಟುಂಬದಲ್ಲಿ ಜನಿಸಿದ ತೇಜಸ್ವಿನಿ, ಚಿಕ್ಕಂದಿನಿಂದಲೂ ಶ್ರಮವಹಿಸಿ ಓದಿ, ಬೆಳೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ಕನಸು ಕಂಡಿದ್ದರು. ಮಂಡಲೀಕನಹಳ್ಳಿ, ಮೂಕಿಕೆರೆ ಗ್ರಾಮದಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿ, ದಿಡಗ ಗ್ರಾಮದಲ್ಲಿ ಪ್ರೌಢಶಾಲೆ, ಹಿರೀಸಾವೆಯಲ್ಲಿ ಪದವಿಪೂರ್ವ ಹಾಗೂ ಪ್ರಥಮ ದರ್ಜೆ ಕಾಲೇಜು ಶಿಕ್ಷಣ ಮುಗಿಸಿದರು.

ಮೈಸೂರಿನ ಮಾನಸ ಗಂಗೋತ್ರಿಯಲ್ಲಿ ಅರ್ಥಶಾಸ್ತ್ರ ವಿಷಯದಲ್ಲಿ ಎಂ.ಎ ಹಾಗೂ ಎಂಫಿಲ್ ಪದವಿ ಪಡೆದುಕೊಂಡರು.

### ಸರ್ಕಾರಿ ಸೇವೆಯ ಜೊತೆಗೆ ಮುಂದುವರಿದ ವಿದ್ಯಾಭ್ಯಾಸ

ಉತ್ತಮ ಓದಿನಿಂದಾಗಿ ಓದು ಮುಗಿದ ಕೂಡಲೇ ಸರ್ಕಾರಿ ಕೆಲಸ ಗಿಟ್ಟಿಸಿಕೊಂಡ ತೇಜಸ್ವಿನಿ,2013 ರಿಂದ 2017ರ ವರೆಗೆ ಚಾಮರಾಜನಗರದಲ್ಲಿ ಪಂಚಾಯತ್ ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕೆಲಸ ಆರಂಭಿಸಿದರು. ನಂತರವೂ ಓದು ಮುಂದುವರಿಸಿ 2017 ರಿಂದ 2024ರ ವರೆಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶೃಂಗೇರಿಯಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕೆಲಸ ಮಾಡಿದ್ದಾರೆ.

ಓದುವ ಛಲ, ಸಾಧಿಸುವ ಕನಸು ಇದ್ದರೆ ಅಂದುಕೊಂಡಿದ್ದನ್ನು ಸಾಧಿಸಿ ತೋರಿಸಬಹುದು ಎಂಬುದಕ್ಕೆ ಡಾ.ತೇಜಸ್ವಿನಿ ಎಂ.ಎಸ್. ಉದಾಹರಣೆಯಾಗಿದ್ದಾರೆ.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನುಷ್ಯ ದೈಹಿಕವಾಗಿ ಎಷ್ಟೇ ಪರಿಪೂರ್ಣನಾಗಿದ್ದರು ನಿಗದಿತ ಸಮಯದಲ್ಲಿ ಕ್ರಮವಾಗಿ ಆರೋಗ್ಯದ ತಪಾಸಣೆಗಳನ್ನು ಮಾಡಿಸಿಕೊಳ್ಳುವುದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷ ಎಚ್.ಪಿ. ಮೋಹನ್ ಹೇಳಿದರು.

ನಗರದ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಬೃಹತ್ ಆರೋಗ್ಯ ತಪಾಸಣೆ ಮತ್ತು ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವಕರು ಶಿಕ್ಷಣ ಪಡೆಯುವುದರೊಂದಿಗೆ ತಮ್ಮ ಆರೋಗ್ಯ ಕಡೆಗೆ ಹೆಚ್ಚು ಗಮನಹರಿಸಬೇಕು. ದಂತ ಮತ್ತು ನೇತ್ರ ತಪಾಸಣೆ ಮುಖ್ಯವಾದುದು ಪ್ರತಿಯೊಬ್ಬರು ಇದನ್ನು ಮಾಡಿಸಿಕೊಳ್ಳಬೇಕು. ರಕ್ತದಾನ ಮಡುವುದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಹೃದಯಾಘಾತದಂತ ಕಾಯಿಲೆಗಳನ್ನು ದೂರವಿಡಬಹುದು. ಆರೋಗ್ಯವಿದ್ದರೆ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದು ಎಂದರು.

ಹಾಸನಾಂಬ ದಂತ ವೈದ್ಯಕೀಯ ಕಾಲೇಜಿನ ಪ್ರಾಧ್ಯಾಪಕ ಡಾ.ಜಿ. ಪ್ರವೀಣ್ ಮಾತನಾಡಿ ದಂತ ಚಿಕಿತ್ಸೆ ಪ್ರತಿಯೊಬ್ಬ ಮನುಷ್ಯನಿಗೂ ಬಹಳ ಮುಖ್ಯ ಹಲ್ಲುನೋವು ಬರುವ ಮುನ್ನ ಮುನ್ನೆಚ್ಚರಿಕಾ ಕ್ರಮವನ್ನು ತೆಗೆದುಕೊಂಡರೆ ನಾವು ಆರೋಗ್ಯದಿಂದ ಜೀವಿಸಬಹುದು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಮನುಷ್ಯ ಬದುಕಿನಲ್ಲಿ ದಂತ ಬಹಳ ಮುಖ್ಯ ಅದನ್ನೆ ಕಾಪಾಡಿಕೊಳ್ಳಬೇಕು. ನಮ್ಮ ಜೀವನದಲ್ಲಿ ಆರೋಗ್ಯವನ್ನು ಬಹಳ ಮುಖ್ಯವಾಗಿ ನೋಡಿಕೊಳ್ಳಬೇಕು ದೈಹಿಕ ಖಾಯಿಲೆ ವಾಸಿಯಾಗುತ್ತದೆ ಆದರೆ ಮಾನಸಿಕ ಖಾಯಿಲೆ ವಾಸಿಯಾಗುವುದಿಲ್ಲ ನಮ್ಮ ಆಲೋಚನೆಗಳನ್ನು ಹಿಡಿತದಲ್ಲಿ ಇಟ್ಟುಕೊಳ್ಳಬೇಕು ಮಾನಸಿಕ ಖಾಯಿಲೆಗೆ ಒಳಗಾಗದೆ ನಮ್ಮ ಆಲೋಚನೆಗಳನ್ನು ಸೀಮಿತವಾಗಿಟ್ಟುಕೊಳ್ಳಬೇಕು. ರಕ್ತ ಬಹಳ ಮುಖ್ಯ ರಕ್ತ ದಾನ ಮಹಾದಾನ ಅದನ್ನು ಕೊಡುವುದರಿಂದ ನಮ್ಮ ದೇಶ ಸದೃಢವಾಗಿರುತ್ತದೆ. ಮಾನವ ದೇಹದಲ್ಲಿ ಹಲವು ಸಮಸ್ಯೆಗಳಿದ್ದರೂ, ಅವು ನಮ್ಮ ಅರಿವಿಗೆ ಬರುವುದಿಲ್ಲ. ಆರೋಗ್ಯದ ವಿಚಾರವಾಗಿ ಅಸಡ್ಡೆ ಬೇಡ



ಜಾಗೃತರಾಗಿರಿ. ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳು ತಮ್ಮಲ್ಲಿರುವ ಸಮಸ್ಯೆಗಳಿಗೆ ವೈದ್ಯರಲ್ಲಿ ಮುಕ್ತವಾಗಿ ಚಿಕಿತ್ಸೆ ಪಡೆದು ಆರೋಗ್ಯ ತಪಾಸಣಾ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾಲೇಜಿನ ಯುವ ರೆಡ್ ಕ್ರಾಸ್ ಘಟಕ, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ಶ್ರೀ ಧರ್ಮಸ್ಥಳ ಆಯುರ್ವೇದ ಆಸ್ಪತ್ರೆ, ರಾಕೇಶ್ ನೇತ್ರಾಲಯ, ಹಾಸನಾಂಬ ದಂತ ವೈದ್ಯಕೀಯ ಕಾಲೇಜು, ಹಾಸನ ರಕ್ತ ನಿಧಿ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ದಂತ ತಪಾಸಣೆ, ನೇತ್ರ ತಪಾಸಣೆ, ರಕ್ತದ ಗುಂಪು ಪತ್ತೆ ಹಾಗೂ ಔಷಧ ವಿತರಣೆ ನಡೆಸಲಾಯಿತು. ಕಾಲೇಜಿನ 600ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆರೋಗ್ಯ ತಪಾಸಣೆ ಶಿಬಿರದ ಸದುಪಯೋಗ ಪಡೆದುಕೊಂಡರು.

ಕಾಲೇಜಿನ ರೆಡ್ ಕ್ರಾಸ್ ಘಟಕದ ಸಂಚಾಲಕ ಡಾ.ಸಿ.ಎಲ್. ಶಿವಕುಮಾರ್ ಹಾಗೂ ಕಾಲೇಜಿನ ಎಲ್ಲಾ ಅಧ್ಯಾಪಕರು ಹಾಜರಿದ್ದರು.

# ಅಕ್ರಮವಾಗಿ ಕಟ್ಟಡ ನಿರ್ಮಾಣ ಆರೋಪ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹೊಸಲೇನ್ ರಸ್ತೆಯಲ್ಲಿರುವ ತಮ್ಮ ಪಿತ್ರಾರ್ಜಿತ ಆಸ್ತಿಯ ಜಾಗವನ್ನು ಲೇಖಕಿ ಹಾಗೂ ವಕೀಲರಾದ ಬಾನು ಮುಷ್ತಾಕ್ ಅವರು ತಮ್ಮದೆಂದು ಹೇಳಿಕೊಂಡು ಅಕ್ರಮವಾಗಿ ಕಟ್ಟಡ ಕಟ್ಟುತ್ತಿದ್ದಾರೆ ಎಂದು ಹಾಲಿ ಮಾಲೀಕರಾದ ತರನುಂತಾಜ್, ಅಸ್ಲಾಂಶೇಖ್ ಖಾನ್ ಮತ್ತು ನೂರ್ ಅಹಮದ್ ಆರೋಪಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಆಸ್ತಿಗೆ ಹೊಂದಿಕೊಂಡರೆ ಅವರದು 80★22 ಅಡಿ ಜಾಗ ಇದೆ. ನಮ್ಮದು 90 ಅಡಿ ಜಾಗ ಇದೆ. ಆದರೀಗ 80 ಅಡಿಗೂ ಅಧಿಕ ಜಾಗದಲ್ಲಿ (86-88 ಅಡಿ) ಕಟ್ಟಡ ನಿರ್ಮಾಣ ಮಾಡುತ್ತಿದ್ದಾರೆ ಎಂದು ದೂರಿದರು.

ವಿಪರ್ಯಾಸ ಎಂದರೆ ಬಾನು ಮುಷ್ತಾಕ್ ಅವರು ಕಟ್ಟಡ ನಿರ್ಮಿಸಲು ಮಹಾನಗರ ಪಾಲಿಕೆಯಿಂದ ಪರವಾನಗಿ ಪಡೆದಿಲ್ಲ. ಬಾನು ಮುಷ್ತಾಕ್ ಅವರು ಕಟ್ಟಡ ಪರವಾನಗಿಗಾಗಿ ಅರ್ಜಿ ಸಲ್ಲಿಸಿದ್ದಾರೆ. ಆದರೆ ತಾಂತ್ರಿಕ ಕಾರಣಗಳಿಂದ ಶುಲ್ಕ ಪಾವತಿಸಲು ಸಾಧ್ಯವಾಗದ ಕಾರಣ ಈ ದಿನಾಂಕದವರೆಗೂ ಕಟ್ಟಡ ಪರವಾನಗಿ ನೀಡಿಲ್ಲ ಎಂದು ಆಯುಕ್ತರು ಹಿಂಬರಹ ನೀಡಿದ್ದಾರೆ ಎಂದು ಪ್ರದರ್ಶನ ಮಾಡಿದರು.

ಜಾಗದ ವಿವಾದ ಹೈಕೋರ್ಟ್ ಮೆಟ್ಟಿಲೇರಿದ್ದು, ಅಲ್ಲಿಂದ ಯಾವುದೇ ತೀರ್ಪು ಹೊರ ಬಂದಿಲ್ಲ. ಜಾಗದ ವಿವಾದ ತೀರ್ಮಾನ ಆಗದೇ ಅದೂ ರಜಾ ದಿನ ನೋಡಿಕೊಂಡು ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದು ಆಪಾದಿಸಿದರು. ಈ ಸಂಬಂಧ 2009 ರಿಂದಲೂ ನಮಗೆ ತೊಂದರೆ ನೀಡುತ್ತಿದ್ದಾರೆ. ಈ ಬಗ್ಗೆ ಕೇಳಲು ಹೋದರೆ ನಮ್ಮ ಮೇಲೆಯೇ ಎಫ್‌ಐಆರ್ ದಾಖಲು ಮಾಡಿಸುತ್ತಾರೆ.

ಸದರಿ ಖಾಲಿ ಸರ್ಕಾರಕ್ಕೆ ಸೇರಿದ್ದರೆ ಯಾರ ಅನುಮತಿ ಪಡೆಯದೇ ಕಟ್ಟಡ ನಿರ್ಮಿಸಬಹುದೇ ಎಂದು ಪ್ರಶ್ನಿಸಿದ ಅವರು, ಸಂಬಂಧಪಟ್ಟವರು ಸ್ಥಳ ಪರಿಶೀಲನೆ ನಡೆಸಿ, ನ್ಯಾಯಾಲಯದಲ್ಲಿ ಪ್ರಕರಣ ಇತ್ಯರ್ಥ ಆಗುವವರೆಗೂ ಕಟ್ಟಡ ಕಾಮಗಾರಿಗೆ ತಡೆ ಒಡ್ಡಬೇಕು ಎಂದು ಮನವಿ ಮಾಡಿದರು.

# ದೇಗುಲ ಅಭಿವೃದ್ಧಿಗೆ ಸ್ವರೂಪ್ ಶಂಕುಸ್ಥಾಪನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ಮಹಾ ನಗರಪಾಲಿಕೆಯ ಅನುದಾನದಡಿ ನಗರದ ವಾರ್ಡ್ ನಂ.29ರ ಹುಣಸಿನಕೆರೆ ಬಡಾವಣೆಯಲ್ಲಿರುವ ಶ್ರೀ ಕಾಶಿ ವಿಶ್ವನಾಥ ದೇವಾಲಯದ 23 ಲಕ್ಷ ರೂ. ವೆಚ್ಚದ ವಿವಿಧ

ಅಭಿವೃದ್ಧಿ ಕಾಮಗಾರಿಗಳಿಗೆ ಸ್ಥಳೀಯ ಶಾಸಕ ಹೆಚ್.ಪಿ. ಸ್ವರೂಪ್ ಪ್ರಕಾಶ್ ಗುರುವಾರ ಭೂಮಿ ಪೂಜೆ ನೆರವೇರಿಸಿ ಶಂಕುಸ್ಥಾಪನೆ ಮಾಡಿದರು.

ಶಂಕುಸ್ಥಾಪನೆ ಬಳಿಕ ಮಾತನಾಡಿದ ಶಾಸಕರು, 23 ಲಕ್ಷ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿರುವ ಈ ಅಭಿವೃದ್ಧಿ ಕಾಮಗಾರಿಗಳು ದೇವಾಲಯದ ಸೌಲಭ್ಯಗಳನ್ನು ವಿಸ್ತರಿಸುವುದರ ಜೊತೆಗೆ ಬಡಾವಣೆಯ ಅಭಿವೃದ್ಧಿಗೂ ಸಹಕಾರಿಯಾಗಲಿವೆ ಎಂದರು. ಹಾಸನ ನಗರಸಭೆ, ಮಹಾನಗರಪಾಲಿಕೆಯಾಗಿರುವ ಹಿನ್ನೆಲೆ ನಗರದ ಪ್ರತಿಯೊಂದು ವಾರ್ಡ್‌ಗೂ ಸಮಾನವಾಗಿ ಅಭಿವೃದ್ಧಿ ಕಾಮಗಾರಿ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. ರಸ್ತೆ, ಚರಂಡಿ, ಕುಡಿಯುವ ನೀರು, ಬೀದಿ ದೀಪ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದರು.



ನಗರದಲ್ಲಿ ವೇಗವಾಗಿ ಬೆಳೆಯುತ್ತಿರುವ ಬಡಾವಣೆಗಳಲ್ಲಿ ಜನರಿಗೆ ಮೂಲಭೂತ ಸೌಕರ್ಯಗಳ ಕೊರತೆ ಉಂಟಾಗದಂತೆ ವಿಶೇಷ ನಿಗಾ ವಹಿಸಲಾಗುತ್ತಿದೆ. ಹುಣಸಿನಕೆರೆ ಬಡಾವಣೆಯಲ್ಲಿಯೂ ಹಲವು ವರ್ಷಗಳಿಂದ ಸಾರ್ವಜನಿಕರು ಮತ್ತು ದೇವಾಲಯದ ಭಕ್ತರು ಅಭಿವೃದ್ಧಿ ಕಾಮಗಾರಿಗಳ ಬೇಡಿಕೆ ಇಟ್ಟಿದ್ದು, ಅದಕ್ಕೆ ಸ್ಪಂದಿಸಿ ಮಹಾ ನಗರಪಾಲಿಕೆ ಅನುದಾನದಡಿ ಈ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

ದೇವಾಲಯಗಳು ಕೇವಲ ಪೂಜಾ ಕೇಂದ್ರಗಳಷ್ಟೇ ಅಲ್ಲದೆ ಸಮಾಜದ ಸಂಸ್ಕೃತಿ, ಪರಂಪರೆ ಮತ್ತು ಜನರ ನಂಬಿಕೆಯ ಪ್ರತೀಕಗಳಾಗಿವೆ. ಇಂತಹ ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಯಿಂದ ಸ್ಥಳೀಯ ಜನರಲ್ಲಿ ಆತ್ಮೀಯತೆ ಹಾಗೂ ಸಾಮಾಜಿಕ ಬಾಂಧವ್ಯ ಹೆಚ್ಚುತ್ತದೆ. ಶ್ರೀ ಕಾಶಿ ವಿಶ್ವನಾಥ ದೇವಾಲಯಕ್ಕೆ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದು, ಇಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಅಗತ್ಯವಾಗಿತ್ತು ಎಂದು ಅವರು ತಿಳಿಸಿದರು.

ಸುಮಾರು 23 ಲಕ್ಷದಲ್ಲಿ ದೇವಾಲಯ ಆವರಣ ಅಭಿವೃದ್ಧಿ, ಕಾಂಕ್ರಿಟ್ ರಸ್ತೆ, ಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಹಾಗೂ ಇತರೆ ಅಗತ್ಯ ಸೌಲಭ್ಯಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಕಾಮಗಾರಿಗಳನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ನಗರದ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ತರಲು ಪ್ರಯತ್ನಿಸಲಾಗುತ್ತಿದೆ. ಹಾಸನ ನಗರ ಮುಂದಿನ ದಿನಗಳಲ್ಲಿ ಮಾದರಿ ನಗರವಾಗಿ ರೂಪುಗೊಳ್ಳಬೇಕು ಎಂಬ ಉದ್ದೇಶದಿಂದ ಅಭಿವೃದ್ಧಿ ಕಾಮಗಾರಿಗಳನ್ನು ಯೋಜಿತ ರೀತಿಯಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಹಲವು ವರ್ಷಗಳಿಂದ ದೇವಾಲಯದ ಅಭಿವೃದ್ಧಿಗೆ ಬೇಡಿಕೆ ಇಟ್ಟಿದ್ದರೂ,ಕಾಮಗಾರಿ ಕೈಗೆತ್ತಿಕೊಳ್ಳಲಾಗಿರಲಿಲ್ಲ. ಇದೀಗ ಸ್ವರೂಪ್ ಪ್ರಕಾಶ್ ಅವರು ತಂದು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿರುವುದು ಸಂತಸದ ವಿಚಾರ ಎಂದು ಭಕ್ತರು, ಸ್ಥಳೀಯರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮುಖಂಡರು, ಮಹಾ ನಗರಪಾಲಿಕೆ ಸದಸ್ಯರು, ಸ್ಥಳೀಯ ಜನಪ್ರತಿನಿಧಿಗಳು, ಬಡಾವಣೆಯ ಹಿರಿಯರು, ಮಹಿಳೆಯರು, ಯುವಕರು ಹಾಗೂ ದೇವಾಲಯದ ಭಕ್ತರು ಉಪಸ್ಥಿತರಿದ್ದರು.

# ಪೆಟ್ಟಿಗೆ ಅಂಗಡಿ ಮಾಲೀಕರ ಅಳಲು

## ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಜಿಲ್ಲಾದಲಿತ-ಸರ್ಕಾರಕ್ಕೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಕಸ್ತೂರಬಾ ರಸ್ತೆಯಲ್ಲಿ ಸುಮಾರು 40 ವರ್ಷಗಳಿಂದ ಪೆಟ್ಟಿಗೆ ಅಂಗಡಿ ಇಟ್ಟುಕೊಂಡಿದ್ದ 28 ವ್ಯಾಪಾರಿಗಳ ಅಂಗಡಿಗಳನ್ನು ಮಹಾನಗರ ಪಾಲಿಕೆ ಆಯುಕ್ತರ ನೇತೃತ್ವದಲ್ಲಿ 3 ಜೆಸಿಬಿಗಳಿಂದ ಏಕಾಏಕಿ ತೆರವುಗೊಳಿಸಿರುವುದರಿಂದ ನಮಗೆ ಅನ್ಯಾಯವಾಗಿದ್ದು, ಕೂಡಲೇ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಸಂತ್ರಸ್ತರು ಒತ್ತಾಯಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ, ಕಸ್ತರಬಾ ರಸ್ತೆಯ ನಗರಸಭೆ ಪೆಟ್ಟಿಗೆ ಅಂಗಡಿ ಮಾಲೀಕರ



ಸಂಘದ ಅಧ್ಯಕ್ಷ ಈಶ್ವರ್, ಜೈಭೀಮ್ ಬಿಗ್ರೇಡ್ ಸಂಘಟನೆ ಜಿಲ್ಲಾಧ್ಯಕ್ಷ ರಾಜೇಶ್, ನಗರಸಭೆಯವರು ಈ ಹಿಂದೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಿ ಹಳೇ ಬಸ್ ನಿಲ್ದಾಣದ ಪಿಕ್ಚರ್ ಪ್ಯಾಲೇಸ್ ಎದುರಿನ ಖಾಲಿ ಜಾಗಕ್ಕೆ ಸ್ಥಳಾಂತರಿಸಿದ್ದರು. ಅಲ್ಲಿಯೇ ನಾವು ವ್ಯಾಪಾರ ಮಾಡುತ್ತಿದ್ದೆವು. ಮಳೆ-ಗಾಳಿಗೆ ಅಂಗಡಿಗಳು ಶಿಥಿಲಗೊಂಡ ಹಿನ್ನೆಲೆ, ವ್ಯಾಪಾರಿಗಳು ಕಳೆದ ಮಾರ್ಚ್‌ನಲ್ಲಿ ನಗರ ಪಾಲಿಕೆಗೆ ಅರ್ಜಿ ಸಲ್ಲಿಸಿ ದುರಸ್ತಿಗೆ ಅನುಮತಿ ಕೋರಿದ್ದರು. ಸ್ಥಳೀಯ ಶಾಸಕರ ಮಧ್ಯಸ್ಥಿಕೆಯಿಂದ ಪಾಲಿಕೆಯಿಂದ ಮೌಖಿಕ ಅನುಮತಿ ಸಿಕ್ಕ ಹಿನ್ನೆಲೆ ವ್ಯಾಪಾರಿಗಳು ಸ್ವಂತ ಖರ್ಚಿನಲ್ಲಿ ದುರಸ್ತಿ ಮಾಡಿಕೊಂಡಿದ್ದರು.

ಆದರೀಗ ದುರಸ್ತಿಗೆ ಅನುಮತಿ ನೀಡಿದ್ದ ಪಾಲಿಕೆಯವರೇ ಆಯುಕ್ತರ ನೇತೃತ್ವದಲ್ಲಿ ಎಲ್ಲಾ 28 ಅಂಗಡಿಗಳನ್ನು ಏಕಾಏಕಿ ತೆರವುಗೊಳಿಸಿದ್ದಾರೆ ಎಂದು ಆರೋಪಿಸಿದರು. ಪಾಲಿಕೆಯವರೇ ದುರಸ್ತಿಗೆ ಅನುಮತಿ ನೀಡಿ, ಈಗ ಅವರೇ ತೆರವು ಮಾಡಿದ್ದಾರೆ. ಇದು ನಮಗೆ ಮಾಡಿದ ದ್ರೋಹ. 40 ವರ್ಷಗಳ ನಮ್ಮ ಬದುಕನ್ನೇ ಕಿತ್ತುಕೊಂಡಿದ್ದು, ಕೂಡಲೇ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಜಿಲ್ಲಾಧಿಕಾರಿಗಳು ಮಧ್ಯ ಪ್ರವೇಶಿಸಿ ಈ ವಿಚಾರವನ್ನು ಸರ್ಕಾರದ ಗಮನಕ್ಕೆ ತಂದು ನ್ಯಾಯ ಒದಗಿಸಿಕೊಡಬೇಕೆಂದು ಮನವಿ ಮಾಡಿದರು.

# ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಚನ್ನರಾಯಪಟ್ಟಣ. ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿ ಬರಗೂರು ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಡಿ.ಕೆ. ಲಕ್ಷ್ಮೀಶ ಆಯ್ಕೆಯಾಗಿದ್ದಾರೆ.

ಬಿ.ಪಿ. ಹರೀಶ ಅವರು ತೆರವು ಮಾಡಿದ್ದ ಸ್ಥಾನಕ್ಕೆ ಈ ದಿನ ನಡೆದ ಚುನಾವಣೆಯಲ್ಲಿ ಸಹಕಾರಿ ಅಭಿವೃದ್ಧಿ ಅಧಿಕಾರಿ ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಡಿ.ಕೆ. ಲಕ್ಷ್ಮೀಶ್ ಒಬ್ಬರೇ ಅರ್ಜಿ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಆಯ್ಕೆಯಾದ ಲಕ್ಷ್ಮೀಶವರನ್ನು ನಿರ್ದೇಶಕರು ಹಾಗೂ ಸ್ನೇಹಿತರು ಬಂಧುಗಳು ಅಭಿನಂದಿಸಿದರು.

ಅಧಿಕಾರ ವಹಿಸಿಕೊಂಡ ನಂತರ ಮಾತನಾಡಿದ ಲಕ್ಷ್ಮೀಶ ಅವರು ನಮ್ಮ ಸಹಕಾರಿ ಸಂಘದಲ್ಲಿ 1700 ಜನ ಶೇರುದಾರರಿದ್ದು ಅದರಲ್ಲಿ 1100 ಜನರಿಗೆ 8 ಕೋಟಿಯಷ್ಟು ಸಾಲ ಒದಗಿಸಲಾಗಿದೆ. 30ಸ್ವಸಾಯ ಸಂಘ ಗುಂಪುಗಳಿಗೆ 94 ಲಕ್ಷ ಸಾಲ ನೀಡಲಾಗಿದೆ.

ಸಕಾಲಕ್ಕೆ ಮರುಪಾವತಿಸುವ ಸದಸ್ಯರಿಗೆ ಹೆಚ್ಚುವರಿ



ಸಾಲ ನೀಡುವ ಸಾಧ್ಯತೆ ಇದ್ದು ಶಾಸಕರಾದ ರೇವಣ್ಣನವರ ಸಹಕಾರ ಹಾಗೂ ವಿಧಾನ ಪರಿಷತ್ ಸದಸ್ಯರಾದ ಸೂರಜ್ ರೇವಣ್ಣನವರ ಸಹಕಾರದಿಂದ ಇನ್ನೂ ಹೆಚ್ಚಿನ ಸಲಹೆಗಳು ರೈತರಿಗೆ ಒದಗಿಸಲಾಗುವುದು ಎಂದು ತಿಳಿಸಿದರು.

ಉಪಾಧ್ಯಕ್ಷರಾದ ಜಯರಾಮ್ ನಿರ್ದೇಶಕರಾದ ಬಿ.ಆರ್. ನಾರಾಯಣಸ್ವಾಮಿ, ಸಿ.ಎಸ್. ನಾಗೇಶ, ಬಿ.ಪಿ. ಹರೀಶ, ಬಿ.ಪಿ.ಹೇಮ ಕುಮಾರ್, ಬಿ ಸಿ ರಾಜು, ಮಂಜುನಾಥ, ಮಂಜಮ್ಮ ಸುನಿತ, ಮಣಿಕಂಠ, ಸಹಕಾರಿ ಸಂಘದ ಮೇಲ್ವಿಚಾರಕರಾದ ಎಸ್ .ಕೆ. ಅಭಿಲಾಶ್, ಎಸ್.ಆರ್. ಮಧು ಉಪಸ್ಥಿತರಿದ್ದರು.

# ಪತ್ರಕರ್ತರು-ಅಧಿಕಾರಿಗಳ ಕ್ರಿಕೆಟ್ ಸಮ್ಮಿಲನ

## ಮೇ 9 ರಿಂದ 2 ದಿನಗಳ ಪಂದ್ಯಾವಳಿ: 16 ತಂಡ ಭಾಗಿ: ಕೆಂಚೇಗೌಡ ವಿವರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಇದೇ ತಿಂಗಳ 9 ಮತ್ತು 10 ರಂದು ನಗರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಮೈದಾನದಲ್ಲಿ ಪತ್ರಕರ್ತರು-ಅಧಿಕಾರಿಗಳ ಕ್ರಿಕೆಟ್ ಸಮ್ಮಿಲನ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷರಾದ ಜೆ.ಆರ್.ಕೆಂಚೇಗೌಡ ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಆರಂಭದ ದಿನ ಬೆಳಗ್ಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರು ಜನಪ್ರತಿನಿಧಿಗಳು-ಹಿರಿಯ ಪತ್ರಕರ್ತರ ಪಂದ್ಯಕ್ಕೆ ಚಾಲನೆ ನೀಡುವರು ಎಂದರು. ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಉದ್ಘಾಟನೆ ನೆರವೇರಿಸಿದರೆ, ಸಂಸದ ಶ್ರೇಯಸ್ ಪಟೇಲ್ ಕ್ರೀಡಾಕೂಟಕ್ಕೆ ಚಾಲನೆ ನೀಡುವರು ಎಂದರು.

ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ದಿಕ್ಸೂಚಿ ಮಾತುಗಳನ್ನಾಡುವರು. ಕೆಯುಡಬ್ಲ್ಯುಜೆ ಉಪಾಧ್ಯಕ್ಷ ಹಾಗೂ ಹಾಸನ ಉಸ್ತುವಾರಿ ಹೆಚ್.ಬಿ.ಮದನಗೌಡರು ಆಶಯ ನುಡಿಗಳನ್ನಾಡುವರು. ತಾವು ಅಧ್ಯಕ್ಷತೆ ವಹಿಸುವುದಾಗಿ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಅರಸೀಕೆರೆ ಶಾಸಕ ಹಾಗೂ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ಶಾಸಕರಾದ ಸಿ.ಎನ್.ಬಾಲಕೃಷ್ಣ, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ಎಂಎಲ್‌ಸಿಗಳಾದ ಡಾ.ಸೂರಜ್ ರೇವಣ್ಣ, ಮಧು ಜಿ.ಮಾದೇಗೌಡ, ವಿವೇಕಾನಂದ ಹಾಗೂ ಮಾಜಿ ಎಂಎಲ್‌ಸಿ ಎಂ.ಎ.ಗೋಪಾಲಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಆಗಮಿಸುವರು ಎಂದು ವಿವರಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಎಸ್ಪಿ ಶುಭಾನ್ವಿತಾ ತಂಡಗಳನ್ನು ಪರಿಚಯ ಮಾಡಿಕೊಡಲಿದ್ದು, ವಿಶೇಷ ಆಹ್ವಾನಿತರಾಗಿ ಉದ್ಯಮಿ ಕಂಚಮಾರನಹಳ್ಳಿ ಕಾಂತಣ್ಣ ಆಗಮಿಸುವರು ಎಂದರು.

2 ದಿನಗಳ ಕ್ರೀಡಾಕೂಟದಲ್ಲಿ ಜನಪ್ರತಿನಿಧಿಗಳ ತಂಡ, ಪತ್ರಕರ್ತರ ತಂಡ ಹಾಗೂ ಅಧಿಕಾರಿಗಳ ತಂಡ ಸೇರಿ ಒಟ್ಟು 16 ತಂಡಗಳು ಭಾಗಿಯಾಗಲಿವೆ. ಕ್ರೀಡಾಕೂಟ ಯಶಸ್ಸಿಗೆ ಎಲ್ಲ ರೀತಿಯ ಸಿದ್ಧತೆ ನಡೆದಿವೆ. ನಗರ ಹಾಗೂ ಜಿಲ್ಲೆಯ ಎಲ್ಲ ಪತ್ರಕರ್ತರು ಆಗಮಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ಉಪಾಧ್ಯಕ್ಷ ಎನ್.ನಂಜುಂಡೇಗೌಡ ಮಾತನಾಡಿ, ಪತ್ರಕರ್ತರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ನಡುವೆ ಉತ್ತಮ ಬಾಂಧ್ಯವ್ಯ ಬೆಸೆಯುವ ಉದ್ದೇಶದಿಂದ ಈ ಕ್ರೀಡಾಕೂಟ ವಿಶೇಷ ಮತ್ತು ಮಹತ್ವದ್ದಾಗಿದೆ. ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ 25 ಸಾವಿರ ಪ್ರಥಮ ಬಹುಮಾನ ಹಾಗೂ ಆಕರ್ಷಕ ಟ್ರೋಫಿ, ರನ್ನರ್ ಅಪ್ ತಂಡಕ್ಕೆ 15 ಸಾವಿರ ಬಹುಮಾನ ಹಾಗೂ ಟ್ರೋಫಿ, 3ನೇ ವಿಜೇತ ತಂಡದಕ್ಕೆ 10 ಸಾವಿರ ನಗದು ಹಾಗೂ ಟ್ರೋಫಿ ನೀಡಲಾಗುವುದು ಎಂದರು.

ಮತ್ತೊಬ್ಬ ಉಪಾಧ್ಯಕ್ಷ ಜಿ.ಪ್ರಕಾಶ್ ಮಾತನಾಡಿ, ಸದಾ ಒತ್ತಡದಲ್ಲಿ ಕೆಲಸ ಮಾಡುವ ಪತ್ರಕರ್ತರು ವೃತ್ತಿಯ ಜೊತೆಗೆ ತಮ್ಮ ಆಟದ ಪ್ರತಿಭೆಯನ್ನೂ ಪ್ರದರ್ಶನ ಮಾಡಲು ಇದು ಉತ್ತಮ ವೇದಿಕೆ. ಇದರ ಯಶಸ್ಸಿಗೆ ಎಲ್ಲರೂ ಕೈಜೋಡಿಸಿ ಎಂದು ಮನವಿ ಮಾಡಿದರು.

ಸಮಾರೋಪ ಸಮಾರಂಭದಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸಮಾರೋಪ ನುಡಿಗಳನ್ನಾಡುವರು. ಅರಕಲಗೂಡು ಶಾಸಕ ಎ.ಮಂಜು ಬಹುಮಾನ ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಎಲ್ಲ ಮಾಜಿ ಅಧ್ಯಕ್ಷರು, ಡಿಎಫ್‌ಒ ಸೌರಭ್‌ಕುಮಾರ್, ಹುಡಾ ಆಯುಕ್ತ ಕೆ.ಎಂ.ರಮೇಶ್, ಮಹಾನಗರ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ, ಕೃಷಿ ಇಲಾಖೆ ಜೆಡಿ ಡಾ.ರಮೇಶ್, ತೋಟಗಾರಿಕೆ ಜೆಡಿ ಹೆಚ್.ಆರ್.ಯೋಗೇಶ್, ಕೆಎಸ್‌ಆರ್‌ಟಿಸಿ ಡಿಸಿ ದಶರಥ್, ಲೋಕೋಪಯೋಗಿ ಇಲಾಖೆ ಸೂಪರಿಂಟೆಂಡೆಂಟ್ ಇಂಜಿನಿಯರ್ ನಳಿನಿ, ಡಿಹೆಚ್‌ಒ ಡಾ.ಅನಿಲ್, ಹಿಮ್ಸ್ ನಿರ್ದೇಶಕ ಡಾ.ರಾಜಣ್ಣ, ಅಬಕಾರಿ ಉಪ ಆಯುಕ್ತರಾದ ಸುಮಿತಾ, ಸೆಸ್ಕಾಂ ಅಧೀಕ್ಷಕ ಇಂಜಿನಿಯರ್ ಗುಂಡಿನಕೇರಿ ಕೃಷ್ಣಪ್ಪ, ಹಾಮೂಲ್ ಎಚಿಡಿ ಮಹೇಶ್ ಹಾಜರಿರುವರು.

ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಖಜಾಂಚಿ ಜಿ.ಪ್ರಕಾಶ್ ಇದ್ದರು.

# ಶಿವಲಿಂಗಜ್ಜಯ್ಯನವರ 139ನೇ ವರ್ಷದ ಪುಣ್ಯಸ್ಮರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಅರಸೀಕೆರೆ: "ಸಾಧು-ಸಂತರು ಹಾಗೂ ಮಠಮಾನ್ಯಗಳನ್ನು ನೋಯಿಸಿ ನುಡಿಯುವ ಶಾಪವು ಮನುಷ್ಯನಿಗೆ ಜನ್ಮಜನ್ಮಾಂತರಕ್ಕೂ ಪಾಪದ ಮೂಟೆಯಾಗಿ ಕಾಡಲಿದೆ. ಇದರಿಂದ ಬದುಕಿನಲ್ಲಿ ನೆಮ್ಮದಿ ಇಲ್ಲದೆ ತೊಂದರೆ ಅನುಭವಿಸಬೇಕಾಗುತ್ತದೆ" ಎಂದು ಹಾರನಹಳ್ಳಿ ಸುಕ್ಷೇತ್ರ ಕೋಡಿಮಠದ ಜಗದ್ಗುರು ಡಾ. ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಮಂಗಳವಾರ ಮಾರ್ಮಿಕವಾಗಿ ನುಡಿದರು. ತಾಲ್ಲೂಕಿನ ಮಾಡಾಳು ಗ್ರಾಮದ ಮೂಲಸ್ಥಾನ ಶ್ರೀ ಸ್ವರ್ಣ ಗೌರಮ್ಮ ದೇವಿ ದೇವಾಲಯದ ಆವರಣದಲ್ಲಿ ಶ್ರೀಗಳ ಸಂಕಲ್ಪ ಹಾಗೂ ಸಾನಿಧ್ಯದಲ್ಲಿ ಆಯೋಜಿಸಲಾಗಿದ್ದ, ಕೋಡಿಮಠದ ಪರಮ ತಪಸ್ವಿ ಶಿವಲಿಂಗಜ್ಜಯ್ಯನವರ 139ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರು ಭಕ್ತರಿಗೆ ಆಶೀರ್ವಚನ ನೀಡಿದರು.

ತಮ್ಮ ಆಶೀರ್ವಚನ ಮುಂದುವರಿಸಿದ ಶ್ರೀಗಳು, "ಸರ್ವ ಸಂಘ ಪರಿತ್ಯಾಗಿಗಳಾಗಿರುವ ಸಾಧು-ಸಂತರಿಗೆ ಮಾಡುವ ಅಪಪ್ರಚಾರ ಮತ್ತು ಅವರು ಪಡುವ ನೋವು ಸಂಬಂಧಪಟ್ಟವರ ವಂಶವನ್ನೇ ನಿರ್ನಾಮ ಮಾಡುತ್ತದೆ. ಹಾಗಾಗಿ ಗುರು ಪರಂಪರೆಯ ಮೇಲೆ ಶ್ರದ್ಧಾ-ಭಕ್ತಿಯಿಂದ ನಡೆದುಕೊಳ್ಳಬೇಕು. 'ಹರ ಮುನಿದರೂ ಗುರು ಕಾಯುವನು' ಎಂಬ ಮಾತಿನಂತೆ ಗುರುವಿಗೆ ಅತ್ಯಂತ ವಿಶಿಷ್ಟ ಸ್ಥಾನ ನೀಡಲಾಗಿದೆ. ಕೋಡಿಮಠವು ಯಾವುದೇ ಒಂದು ಜಾತಿ ಅಥವಾ ಧರ್ಮಕ್ಕೆ ಸೀಮಿತವಾಗಿಲ್ಲ; ಇದು ಸರ್ವಧರ್ಮೀಯರಿಗೂ ಹರಸಿ ಮಾರ್ಗದರ್ಶನ ನೀಡುವ ಮಠವಾಗಿದೆ," ಎಂದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಹಂದಿಗೂಡು ಮಠದ ಶಿವಯೋಗಿ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, "12ನೇ ಶತಮಾನದಲ್ಲಿ ಬಸವಣ್ಣನವರು ಸ್ಥಾಪಿಸಿದ ಮಠಗಳು ಇಂದಿಗೂ ಅದೇ ಸಿದ್ಧಾಂತದಡಿ ಸಮಾಜ ಸೇವೆ ಮಾಡುತ್ತಿವೆ. ಕೋಡಿಮಠದ ಶ್ರೀಗಳು ಜಾತಿ, ಮತ, ಪಂಥ ಭೇದವಿಲ್ಲದೆ ಸಾಮರಸ್ಯದ ಸಹಬಾಳ್ವೆಯ ಸಂದೇಶ ಸಾರುತ್ತಿರುವುದು ಇತರ ಮಠಗಳಿಗೆ ಆದರ್ಶಪ್ರಾಯವಾಗಿದೆ," ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಇದೇ ವೇಳೆ ಮಾಡಾಳಿನ ಮೂಲಸ್ಥಾನ ಗೌರಮ್ಮ ದೇವಿ ದೇವಾಲಯವು ಭವಿಷ್ಯದಲ್ಲಿ 11ನೇ ಶಕ್ತಿಪೀಠವಾಗಿ ಉಜ್ವಲವಾಗಿ ಬೆಳೆಯಲಿದೆ ಎಂದು ಶ್ರೀಗಳು ಆಶಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ಜಿ.ಬಿ.ಟಿ. ಬಸವರಾಜ್, ಉದ್ಯಮಿ ಕೆ.ವಿ.ಎನ್. ಶಿವು, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ರಾಂಪುರ ಶೇಖರಪ್ಪ, ಡಿಎಸ್‌ಎಸ್ ಜಿಲ್ಲಾಧ್ಯಕ್ಷ ಶಂಕರ್ ನಾರಾಯಣ್ ಹಾಗೂ ಕುರುಬ ಸಮಾಜದ ಮುಖಂಡ ಶ್ರೀಧರ್ ಮಾತನಾಡಿದರು.

ಸಮಾರಂಭದಲ್ಲಿ ಬೊಮ್ಮನಹಳ್ಳಿ ಶಿವಯೋಗಿ ಸ್ವಾಮೀಜಿ, ಮಾಡಾಳು ನಿರಂಜನ ಪೀಠದ ರುದ್ರಮುನಿ ಸ್ವಾಮೀಜಿ, ಮೂರು ಕಳಸು ಮಠದ ಜ್ಞಾನಪ್ರಭು ಸಿದ್ಧರಾಮದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ, ಗೌರಮ್ಮ ಸೇವಾ ಸಮಿತಿ ಅಧ್ಯಕ್ಷ ಎಂ.ಎಸ್. ನಟರಾಜ್, ಎಸ್. ಮಲ್ಲಿಕಾರ್ಜುನಪ್ಪ, ಕೋಡಿಮಠದ ಏಜೆಂಟ್ ಮಹದೇವಪ್ಪ, ಎಂ.ಜಿ. ಶಿವಣ್ಣ ಸೇರಿದಂತೆ ಗ್ರಾಮದ ಪ್ರಮುಖರು ಹಾಗೂ ಸಾವಿರಾರು ಭಕ್ತರು ಭಾಗವಹಿಸಿದ್ದರು.

# ಕಾಫಿ ತೋಟದಲ್ಲಿ ದುರಂತ: ಅಲ್ಯೂಮಿನಿಯಂ ಏಣಿ ವಿದ್ಯುತ್ ತಂತಿಗೆ ತಗುಲಿ ವ್ಯಕ್ತಿ ದಾರುಣ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ (ಹಾಸನ): ಕಾಫಿ ತೋಟದಲ್ಲಿ ಮರಗಸಿ (ಮರಗಳ ಕೊಂಬೆ ಕತ್ತರಿಸುವ) ಕೆಲಸ ಮಾಡುವಾಗ ಅಲ್ಯೂಮಿನಿಯಂ ಏಣಿಯು ಆಕಸ್ಮಿಕವಾಗಿ ವಿದ್ಯುತ್ ತಂತಿಗೆ ತಗುಲಿ ವ್ಯಕ್ತಿಯೊಬ್ಬರು ದಾರುಣವಾಗಿ ಸಾವನ್ನಪ್ಪಿರುವ ಘಟನೆ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನಲ್ಲಿ ನಡೆದಿದೆ.

ಮೃತಪಟ್ಟ ವ್ಯಕ್ತಿಯನ್ನು ಸಕಲೇಶಪುರ ತಾಲ್ಲೂಕಿನ ರಾಜೇಂದ್ರ ಪುರ ಗ್ರಾಮದ ನಿವಾಸಿ ದುಶ್ಯಂತ್ (40) ಎಂದು ಗುರುತಿಸಲಾಗಿದೆ.

**ಘಟನೆಯ ವಿವರ**

ದುಶ್ಯಂತ್ ಅವರು ತಮ್ಮ ಗ್ರಾಮದ ಇತರರಾದ ದೇವರಾಜು, ಅನಿಲ್, ನಂದನ್, ಶರತ್ ಮತ್ತು ಮಂಜು ಎಂಬುವರೊಂದಿಗೆ ಹೊಸಗದ್ದೆ ಗ್ರಾಮದಲ್ಲಿರುವ ಮೋಹನ್ ಬಿ.ಡಿ. ಅವರಿಗೆ ಸೇರಿದ ಕಾಫಿ ತೋಟಕ್ಕೆ ಮರಗಸಿ ಕೆಲಸಕ್ಕೆಂದು ತೆರಳಿದ್ದರು. ತೋಟದಲ್ಲಿ ಮರಗಸಿ ಮಾಡಲು ಅಲ್ಯೂಮಿನಿಯಂ ಏಣಿಯನ್ನು ಬಳಸಲಾಗುತ್ತಿತ್ತು.

ಒಂದು ಮರದ ಕೆಲಸ ಮುಗಿಸಿ, ಮತ್ತೊಂದು ಮರವನ್ನು ಕತ್ತರಿಸಲು ದುಶ್ಯಂತ್ ಅವರು ಏಣಿಯನ್ನು ಹೊತ್ತುಕೊಂಡು ಹೋಗುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ. ತೋಟದ ಮೇಲ್ಭಾಗದಲ್ಲಿ ಹಾದು ಹೋಗಿದ್ದ ಹೈಟೆನ್ಷನ್ ವಿದ್ಯುತ್ ತಂತಿಗೆ ಅಲ್ಯೂಮಿನಿಯಂ ಏಣಿ ಆಕಸ್ಮಿಕವಾಗಿ ತಗುಲಿದ್ದು, ಕ್ಷಣಾರ್ಧದಲ್ಲಿ ದುಶ್ಯಂತ್ ಅವರಿಗೆ ತೀವ್ರ ಸ್ವರೂಪದ ವಿದ್ಯುತ್ ಶಾಕ್ ಹೊಡೆದಿದೆ.

ಆಸ್ಪತ್ರೆಗೆ ಸಾಗಿಸುವಾಗ ಸಾವು: ವಿದ್ಯುತ್ ಸ್ಪರ್ಶದಿಂದ ಗಂಭೀರವಾಗಿ ಗಾಯಗೊಂಡು ಒದ್ದಾಡುತ್ತಿದ್ದ ದುಶ್ಯಂತ್ ಅವರನ್ನು ಜೊತೆಯಲ್ಲಿದ್ದ ಕಾರ್ಮಿಕರು ತಕ್ಷಣವೇ ರಕ್ಷಿಸಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ, ತೀವ್ರವಾಗಿ ಗಾಯಗೊಂಡಿದ್ದ ಅವರು ಆಸ್ಪತ್ರೆಗೆ ತಲುಪುವಷ್ಟರಲ್ಲಿಯೇ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದುಬಂದಿದೆ.

**ಪೊಲೀಸರ ಭೇಟಿ ಮತ್ತು ಪರಿಶೀಲನೆ**

ವಿಷಯ ತಿಳಿದ ತಕ್ಷಣ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ಕ್ರಮ ಕೈಗೊಳ್ಳಲಾಗಿದೆ.

# ನಿವೃತ್ತಿ ಘೋಷಿಸಿದ ಹಳ್ಳಿ ಹಕ್ಕಿ ಖ್ಯಾತಿಯ ವಿಶ್ವನಾಥ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಮೈಸೂರು: 50 ಕೋಟಿ ಖರ್ಚು ಮಾಡಿ ಚುನಾವಣೆ ಎದುರಿಸುವ ಶಕ್ತಿ ನನ್ನಲ್ಲಿಲ್ಲ. ಈ ಕಾರಣಕ್ಕಾಗಿ ನಾನು ಮುಂದೆ ಯಾವುದೇ ಚುನಾವಣೆಯಲ್ಲಿ ಸ್ಪರ್ಧೆ ನಡೆಸುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಘೋಷಿಸಿದ್ದಾರೆ. ಗುರುವಾರ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಚುನಾವಣಾ ರಾಜಕೀಯದಿಂದ ನಿವೃತ್ತಿಯಾಗುತ್ತೇನೆ ಎಂದು ತಿಳಿಸಿದರು.

ತಮ್ಮ ಚುನಾವಣಾ ರಾಜಕೀಯದ ಜರ್ನಿಯನ್ನು ತೆರೆದಿಟ್ಟ ಅವರು, ನಾನು ಹಲವು ಬಾರಿ ಚುನಾವಣೆಗೆ ನಿಂತಾಗ ಜನರೇ ಹಣ ನೀಡಿ ಆಶೀರ್ವಾದ ಮಾಡಿದ್ದರು. ಆದರೆ ಇದೀಗ ನಾವೇ ಹಣ ನೀಡಿ ಚುನಾವಣೆಯನ್ನು ಎದುರಿಸುವ ಪರಿಸ್ಥಿತಿ ಇದೆ. ಈ ಕಾರಣಕ್ಕಾಗಿ ಚುನಾವಣಾ ರಾಜಕಾರಣಕ್ಕೆ ವಿದಾಯ ಹೇಳುತ್ತಿದ್ದೇನೆ ಎಂದರು.

ರಾಜ್ಯ ರಾಜಕಾರಣದಲ್ಲಿ ತಮ್ಮ ವಿಶಿಷ್ಠ ಶೈಲಿಯ ಮೂಲಕ ಗುರುತಿಸಿಕೊಂಡಿದ್ದ ಎಚ್ ವಿಶ್ವನಾಥ್ ಇದೀಗ ಚುನಾವಣಾ ರಾಜಕೀಯದಿಂದ ಹಿಂದೆ ಸರಿಯುವ ಘೋಷಣೆ ಮಾಡಿದ್ದಾರೆ. ವಿಶ್ವನಾಥ್ ರಾಜ್ಯದಲ್ಲಿ ಶಾಸಕನಾಗಿ, ಸಚಿವರಾಗಿ ವಿವಿಧ ಜವಾಬ್ದಾರಿ ನಿರ್ವಹಣೆ ಮಾಡಿದ್ದಾರೆ.

ಎಚ್‌ವಿ ರಾಜಕೀಯ ಇತಿಹಾಸ: ಎಚ್.ವಿಶ್ವನಾಥ್ ಹಿರಿಯ ರಾಜಕಾರಣಿ. ಕುರುಬ ಸಮುದಾಯದ ವಿಶ್ವನಾಥ್, ರಾಜ್ಯ ಮತ್ತು ರಾಷ್ಟ್ರ ರಾಜಕಾರಣದಲ್ಲಿ ಸುಮಾರು ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಸಕ್ರಿಯವಾಗಿದ್ದವರು. ಇವರು ಕೇವಲ ರಾಜಕಾರಣಿ ಮಾತ್ರವಲ್ಲ, ಸಾಹಿತಿಯಾಗಿಯೂ ಗುರುತಿಸಿ ಕೊಂಡಿದ್ದಾರೆ. ಕೆಲಮೊಂದು ಪುಸ್ತಕಗಳನ್ನು ಬರೆದಿದ್ದಾರೆ. ಹಳ್ಳಿ ಹಕ್ಕಿಯ ಹಾಡು ಅವರ ಆತ್ಮಕತೆಯಾಗಿದೆ.

ಎಚ್.ವಿಶ್ವನಾಥ್ ಅವರು ದಿ.ದೇವರಾಜ ಅರಸು ಅವರ ಗರಡಿಯಲ್ಲಿ ಬೆಳೆದವರು. ಹಿಂದುಳಿದ ವರ್ಗಗಳ ಪರವಾಗಿ ಧ್ವನಿ ಎತ್ತಿದವರು. ಹಲವು ಬಾರಿ ಶಾಸರರಾಗಿ ಆಯ್ಕೆಯಾಗಿದ್ದರು.

ಅಷ್ಟೇ ಅಲ್ಲದೆ, ಎಸ್.ಎಂ. ಕೃಷ್ಣ ಅವರ ಸರ್ಕಾರದಲ್ಲಿ ಶಿಕ್ಷಣ ಸಚಿವರರಾಗಿಯೂ ಸೇವೆ ಸಲ್ಲಿಸಿದ್ದಾರೆ. ಅಕ್ಷರ ದಾಸೋಹ ಹೆಸರಿನಲ್ಲಿ ಬಿಸಿಯೂಟ ಯೋಜನೆ ಇವರ ಅವಧಿಯಲ್ಲಿ ಅರಂಭಗೊಂಡಿತ್ತು.

ರಾಜ್ಯ ರಾಜಕಾರಣ ಅಲ್ಲದೆ, ಕೇಂದ್ರ ರಾಜಕೀಯದಲ್ಲೂ ವಿಶ್ವನಾಥ್ ಗುರುತಿಸಿಕೊಂಡಿದ್ದರು. ಸಂಸದರಾಗಿ ಲೋಕಸಭೆಯನ್ನು ಪ್ರವೇಶ ಮಾಡಿದ್ದರು. 2009ರಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಜಯಗಳಿಸಿ ಸಂಸತ್ ಪ್ರವೇಶ ಮಾಡಿದ್ದರು. ಆದರೆ ನಂತರದಲ್ಲಿ ಕೆಲಮೊಂದು ಅಸಮಾಧಾನಗಳ ಕಾರಣದಿಂದಾಗಿ ಅವರು ಕಾಂಗ್ರೆಸ್ ಪಕ್ಷವನ್ನು ತೊರೆದರು. ಬಳಿಕ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು. ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷರಾಗಿಯೂ ಅವರು ಕಾರ್ಯ ನಿರ್ವಹಣೆ ಮಾಡಿದ್ದರು. 2018ರ ವಿಧಾನಸಭಾ ಚುನಾವಣೆಯಲ್ಲಿ ಹುಣಸೂರು ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು.

ವಿವಾದಗಳ ನಾಯಕ: ವಿಶ್ವನಾಥ್ ವಿರುದ್ಧ ಸಾಕಷ್ಟು ವಿವಾದಗಳು ಸುತ್ತಿಕೊಂಡಿವೆ. ಸಿಎಂ ಸಿದ್ದರಾಮಯ್ಯ ಅವರ ಕುರಿತಾಗಿಯೂ ಕೆಲಮೊಂದು ಗಂಭೀರ ಆರೋಪ ಮಾಡಿದ್ದರು. ಅಷ್ಟೇ ಅಲ್ಲದೆ, ಜಾತ್ಯತೀತ ಸಿದ್ಧಾಂತ ಹೊಂದಿದ್ದರೂ ಆಪರೇಷನ್ ಕಮಲದ ಮೂಲಕ ಬಿಜೆಪಿ ಸೇರ್ಪಡೆಗೊಂಡರು. ನ.2019 ರಲ್ಲಿ ಜೆಡಿಎಸ್-ಕಾಂಗ್ರೆಸ್ ಸಮ್ಮಿಶ್ರ

ಸರ್ಕಾರದ ವಿರುದ್ಧ ಅತೃಪ್ತಿ ವ್ಯಕ್ತಪಡಿಸಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ 17 ಶಾಸಕರಲ್ಲಿ ಇವರು ಒಬ್ಬರಾಗಿದ್ದರು.

ಈ ಸಂದರ್ಭದಲ್ಲಿ ಅವರು ಮುಂಬೈನಲ್ಲಿ ಉಳಿದುಕೊಂಡಿದ್ದರು. ನಂತರದಲ್ಲಿ ಮುಂಬೈನಲ್ಲಿ ಆಪರೇಷನ್ ಕಮಲದ ಸಂದರ್ಭದಲ್ಲಿ ನಡೆದ ಬೆಳವಣಿಗೆಗಳ ಕುರಿತಾಗಿ ಅವರು ಪುಸ್ತಕಮೊಂದನ್ನು ಬರೆದಿದ್ದರು. ಇದು ವಿವಾದಕ್ಕೆ ಎಡೆಮಾಡಿಕೊಟ್ಟಿತ್ತು.

ಬಿಜೆಪಿಗೆ ಸೇರ್ಪಡೆಯಾಗಿ ಹುಣಸೂರು ಕ್ಷೇತ್ರದಿಂದ ಅವರು ಚುನಾವಣೆಗೆ ಸ್ಪರ್ಧಿಸಿದ್ದರು. ಆದರೆ ಗೆಲ್ಲಲು ಸಾಧ್ಯವಾಗಿರಲಿಲ್ಲ. ನಂತರದಲ್ಲಿ ಬಿ.ಎಸ್ ಯಡಿಯೂರಪ್ಪ ಸರ್ಕಾರ ಎಚ್ ವಿಶ್ವನಾಥ್ ಅವರನ್ನು ವಿಧಾನಪರಿಷತ್‌ಗೆ ನಾಮನಿರ್ದೇಶನ ಮಾಡಿತ್ತು.

# ಕಾಫಿ ಬೆಳಗಾರರ ಸಂಕಷ್ಟ ಗಂಭೀರ

## ಸ್ಥಳೀಯ ಸಂಪನ್ಮೂಲ ಬಳಕೆ ಅಗತ್ಯ : ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ರಾಜ್ಯದ ಪ್ರಮುಖ ವಾಣಿಜ್ಯ ಬೆಳೆಗಳಲ್ಲಿ ಒಂದಾದ ಕಾಫಿ ಬೆಳೆಗಾರರು ಇತ್ತೀಚಿನ ವರ್ಷಗಳಲ್ಲಿ ಹವಾಮಾನ ವೈಪರಿತ್ಯ, ಕಾರ್ಮಿಕರ ತೀವ್ರ ಕೊರತೆ ಹಾಗೂ ಕಾಡು ಪ್ರಾಣಿಗಳ ಹಾವಳಿಯಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದ್ದಾರೆ.ಗುರುವಾರ ತಾಲ್ಲೂಕಿನ ಬಾಳ್ಳುಪೇಟೆಯಲ್ಲಿ

ಬೆಳಗೋಡು ಹೋಬಳಿ ಕಾಫಿ ಬೆಳೆಗಾರರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ಹಾಗೂ ವಾರ್ಷಿಕ ಮಹಾ

ಸಭೆಯಲ್ಲಿ ಮಾತನಾಡಿದ ಅವರು, ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧಗಳು ಭಾರತಕ್ಕೆ ನೇರವಾಗಿ ದೊಡ್ಡ ಮಟ್ಟದ ಪರಿಣಾಮ ಬೀರುವ ಮಟ್ಟಿಗೆ ಇಲ್ಲದಿದ್ದರೂ, ಎಲ್‌ಪಿಜಿ ಸೇರಿದಂತೆ ಕೆಲವು ಇಂಧನಗಳ ಬೆಲೆ ಏರಿಕೆಯಿಂದ ಪರೋಕ್ಷವಾಗಿ ತೊಂದರೆಗಳು ಉಂಟಾಗಿವೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ದೇಶವು ಸ್ವಾವಲಂಬನೆಯತ್ತ ಹೆಜ್ಜೆ ಇಡುವ ಅಗತ್ಯವಿದೆ. ''ಬೇರೆ ದೇಶಗಳ ಮೇಲೆ ಅವಲಂಬನೆ ಕಡಿಮೆ ಮಾಡಿ, ಸ್ಥಳೀಯ ಸಂಪನ್ಮೂಲಗಳನ್ನು ಪರಿಣಾಮಕಾರಿ ರೀತಿಯಲ್ಲಿ ಬಳಸಿಕೊಳ್ಳುವುದು ಕಾಲದ ಅಗತ್ಯ. ಇದರಿಂದ ಭವಿಷ್ಯದ ಪೀಳಿಗೆಗೆ ಸ್ಥಿರತೆ ಸಿಗುತ್ತದೆ'' ಎಂದು ಅವರು ಅಭಿಪ್ರಾಯಪಟ್ಟರು.

ಇಂದಿನ ಯುವಜನರು ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಗಳತ್ತ ಮುಖ ಮಾಡುತ್ತಿರುವುದರಿಂದ ಕಾಫಿ ತೋಟಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಸಂಖ್ಯೆ ಕುಸಿಯುತ್ತಿರುವುದು ಆತಂಕಕಾರಿ ಬೆಳವಣಿಗೆ. ಕಾಫಿ ಕ್ಷೇತ್ರವೇ ಹಲವಾರು ಕುಟುಂಬಗಳ ಜೀವನಾಡಿಯಾಗಿರುವುದರಿಂದ ತೋಟಗಳ ನಿರ್ವಹಣೆಗೆ ಕಾರ್ಮಿಕರ ಲಭ್ಯತೆ ಹೆಚ್ಚಿಸುವ ದಿಸೆಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಇದೇ ವೇಳೆ ಅಕ್ರಮ ವಲಸಿಗರ ಹಾವಳಿಯಿಂದ ಬೆಳಗಾರರ ಜೀವ ಭದ್ರತೆಗೆ ಧಕ್ಕೆಯುಂಟಾಗುತ್ತಿರುವುದನ್ನೂ ಅವರು ಉಲ್ಲೇಖಿಸಿ, ಈ ಸಮಸ್ಯೆಯನ್ನು ನಿಯಂತ್ರಿಸಲು ಕಟ್ಟುನಿಟ್ಟಿನ ಕ್ರಮ ಅಗತ್ಯವಿದೆ ಎಂದರು.

ಕಾಫಿ ಉದ್ಯಮ ದೇಶದ ಆರ್ಥಿಕತೆಗೆ ಮಹತ್ವದ ಕೊಡುಗೆ ನೀಡುವ ಕ್ಷೇತ್ರವಾಗಿದ್ದು, ಇದರ ಸಮಗ್ರ ಅಭಿವೃದ್ಧಿಗೆ ವಿಶೇಷ ಗಮನ ಹರಿಸಬೇಕು ಎಂದು ಹೇಳಿದರು.

''ಶಾಸಕರಾದ ನಂತರ ಕ್ಷೇತ್ರದ ಬೆಳಗಾರರು ಹಾಗೂ ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದೇನೆ. ಮುಂದುವರೆಯುವ ದಿನಗಳಲ್ಲಿಯೂ ಬೆಳಗಾರರ ಧ್ವನಿಯಾಗಿ ನಿಲ್ಲುತ್ತೇನೆ'' ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಈ ಸಂಧರ್ಭದಲ್ಲಿ ಬೆಳಗೋಡು ಹೋಬಳಿ ಬೆಳೆಗಾರರ ಸಂಘದ ಅಧ್ಯಕ್ಷ ರಾಮಕೃಷ್ಣ, ಉಪಾಧ್ಯಕ್ಷ ದೇವರಾಜ್, ಕಾರ್ಯದರ್ಶಿ ಹೆಗ್ಗೋವೆ ಪುಟ್ಟರಾಜ್, ಸಹ ಕಾರ್ಯದರ್ಶಿ ವಿಶ್ವನಾಥ್, ಎಚ್. ಡಿ. ಪಿ.ಎ ಅಧ್ಯಕ್ಷ ಪರಮೇಶ್, ಹಾಸನ ಜಿಲ್ಲಾ ಬೆಳೆಗಾರರ ಸಂಘದ ಕಾರ್ಯದರ್ಶಿ ಲೋಹಿತ್ ಕೌಡಳ್ಳಿ, ಕರ್ನಾಟಕ ಬೆಳೆಗಾರರ ಸಂಘದ ಉಪಾಧ್ಯಕ್ಷ ಬೆಕ್ಕನಹಳ್ಳಿ ನಾಗರಾಜ್, ಕರ್ನಾಟಕ ಬೆಳೆಗಾರರ ಸಂಘದ ಕಾರ್ಯದರ್ಶಿ ಟಿ.ಪಿ ಸುರೇಂದ್ರ, ಸೆವೆನ್ ಬೀನ್ಸ್ ಚೆರ್ಮನ್ ಧರ್ಮರಾಜ್, ಮಾಜಿ ಅಧ್ಯಕ್ಷ ಕೆ.ಎಲ್ ಮಂಜೇಗೌಡ, ಕಾಫಿ ಬೋರ್ಡ್ ಉಪ ನಿರ್ದೇಶಕ ಶಕ್ತಿ, ಹಿರಿಯ ಸಂಪರ್ಕ ಅಧಿಕಾರಿ ಡಾ.. ರಂಜಿತ್ ಸೇರಿದಂತೆ ಬೆಳೆಗಾರರ ಸಂಘದ ಪದಾಧಿಕಾರಿಗಳು, ನಿರ್ದೇಶಕರು, ಸದಸ್ಯರು ಹಾಗೂ ಕಾಫಿ ಬೆಳೆಗಾರರು ಉಪಸ್ಥಿತರಿದ್ದರು

# ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಪ್ರಶಸ್ತಿಗಳು ಮನುಷ್ಯನಿಗೆ ಅಹಂಕಾರ ತರಬಾರದು ಎಂದು ನಿವೃತ್ತ ಪ್ರಾಧ್ಯಾಪಕ ಎಚ್.ಸಿದ್ದೇಗೌಡ ತಿಳಿಸಿದರು.

ಪಟ್ಟಣದ ಕರ್ನಾಟಕ ಸಂಘದ ಸಭಾಂಗಣದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಲಾಗಿದ್ದ 112ನೇ ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಮತ್ತು ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್ ನಡೆದು ಬಂದ ಹಾದಿಯ ಕುರಿತು ತಿಳಿಸಿದರು. ವಿದ್ಯಾರ್ಥಿಗಳಿಗೆ ಬರೀ ವೈದ್ಯಕೀಯ ಹಾಗೂ ಅಭಿಯಂತರ ವೃತ್ತಿ ಮಾತ್ರವಲ್ಲ ಇನ್ನೂ ವಿಶಾಲವಾದ ಅವಕಾಶಗಳು ಇದ್ದು ಅವನ್ನು ಬಳಸಿಕೊಳ್ಳಬೇಕು ತಂದೆ ತಾಯಿಗಳ ಶ್ರಮ ಹೆಚ್ಚು ಇರುತ್ತದೆ ವಿನಯವಂತಿಕೆಯನ್ನು ವಿದ್ಯಾರ್ಥಿಗಳು ಕಲಿಯಬೇಕು ಎಂದರು.

ಕಾರ್ಯಕ್ರಮದಲ್ಲಿ 2025-26 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯಲ್ಲಿ 125 ಅಂಕಗಳಿಗೆ 125 ಅಂಕಗಳನ್ನು ಪಡೆದ 31 ವಿದ್ಯಾರ್ಥಿಗಳು ಹಾಗೂ ಅತಿ ಹೆಚ್ಚು ಅಂಕ ಪಡೆದು ತಾಲೂಕಿಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು

ಕನ್ನಡ ಭಾಷೆಯ ಬೆಳವಣಿಗೆಯಲ್ಲಿ ಸಾಹಿತ್ಯ ಪರಿಷತ್‌ನ ಪಾತ್ರ ಬಹುಮುಖ್ಯವಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಅಭಿಪ್ರಾಯಪಟ್ಟರು.

ಪಟ್ಟಣದ ಕರ್ನಾಟಕ ಸಂಘದಲ್ಲಿ , ಕನ್ನಡ ಸಾಹಿತ್ಯ ಪರಿಷತ್ತಿನ ಸ್ಥಾಪನೆಯ ಹಿಂದೆ ಗಂಭೀರವಾದ ಬೌದ್ಧಿಕ ಚರ್ಚೆಗಳು ಮತ್ತು ಸಾಂಸ್ಕೃತಿಕ ಚಿಂತನೆಗಳು ಇದ್ದವು. ಕನ್ನಡ ಭಾಷೆಯನ್ನು ಪರಿಷ್ಕರಿಸಿ, ಸಾಹಿತ್ಯವನ್ನು ಅಭಿವೃದ್ಧಿಪಡಿಸಿ, ಅಂದು ಸಮಾಜದ ನಾನಾ ಕ್ಷೇತ್ರಗಳಿಗೆ ಉಪಯುಕ್ತವಾಗುವಂತೆ ರೂಪಿಸುವುದೇ ಇದರ ಮುಖ್ಯ ಉದ್ದೇಶವಾಗಿತ್ತು. ನಾಡು-ನುಡಿ ಸಂಸ್ಕೃತಿಯ ರಕ್ಷಣೆ ಮತ್ತು ವಿಕಾಸಕ್ಕಾಗಿ ಕಂಕಣಬದ್ಧವಾಗಿರುವ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು. ಕನ್ನಡ ಸಾಹಿತ್ಯ ಪರಿಷತ್ತು ನಮ್ಮೆಲ್ಲರಿಗೆ ಏಕತೆ ಹಾಗೂ ಅಸ್ಮಿತೆಯ ಸಂಕೇತ. ಸಾಹಿತ್ಯ ಪರಿಷತ್ತು ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ಅನೇಕ ಮಹನೀಯರು, ಹೋರಾಟಗಾರರು ಪರಿಷತ್ತಿನ ಬೆಳವಣಿಗೆಗೆ ಕೊಡುಗೆ ನೀಡಿದ್ದಾರೆ. ಪರಿಷತ್ತು ಉದಯಕ್ಕೆ ಕಾರಣರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ನಾವು ಈ ಸಂದರ್ಭದಲ್ಲಿ ಸ್ಮರಿಸಬೇಕು ಎಂದರು.

ಕನ್ನಡ ಭಾಷೆ ಭವ್ಯ ಇತಿಹಾಸವನ್ನು ಹೊಂದಿದೆ. ಇದನ್ನು ಉಳಿಸಿ ಬೆಳೆಸಬೇಕಾದರೆ ಮಕ್ಕಳಲ್ಲಿ ಭಾಷಾ ಸಾಹಿತ್ಯವನ್ನು ಓದುವ ಆಸಕ್ತಿ ಬೆಳೆಸಬೇಕು ಕನ್ನಡ ಸಾಹಿತ್ಯ ಪರಂಪರೆಯನ್ನು ಮುಂದಿನ ಸಮಾಜಕ್ಕೆ ನೀಡುವ ಗುರುತರ ಹೊಣೆ ವಿದ್ಯಾರ್ಥಿಗಳ ಮೇಲಿದೆ. ಪರಂಪರೆಯ ಬಗ್ಗೆ ಪುಸ್ತಕಗಳನ್ನು ಓದುವ ಮೂಲಕ ಭವಿಷ್ಯದ ಸಾಹಿತಿಗಳಾಗಿ ಬೆಳೆಯಬೇಕು. ಕನ್ನಡ ಭಾಷೆ ಬೆಳವಣಿಗೆಗೆ ಪ್ರತಿಯೊಬ್ಬರೂ ಶ್ರಮಿಸಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಚ್. ಸತೀಶ್ ಮಕ್ಕಳ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಚ.ನಾ. ಅಶೋಕ್, ಕರ್ನಾಟಕ ಸಂಘದ ಅಧ್ಯಕ್ಷ ಆದಿಶೇಷಕುಮಾರ್, ಟಿಎಪಿಸಿಎಂಎಸ್ ಅಧ್ಯಕ್ಷ ಎಚ್. ಆರ್.ವೆಂಕಟೇಶ್ ಮೂರ್ತಿ, ನಿರ್ದೇಶಕ ಕುಂಬಾರಳ್ಳಿ ರಮೇಶ್, ತಾಲೂಕು ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಯಾನಂದ ಶೆಟ್ಟಿಹಳ್ಳಿ, ಶಿಕ್ಷಣ ಸಂಯೋಜಕ ಶಿವಾನಂದ್ , ಕೆಡಿಪಿ ಸದಸ್ಯ ಕಬ್ಬಾಳು ಮಹೇಶ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷ ಮಲ್ಲೇಗೌಡ, ಕಾರ್ಯದರ್ಶಿ ಶಿವನಗೌಡ ಪಾಟೀಲ್, ಸಂಘಟನಾ ಕಾರ್ಯದರ್ಶಿ ಝುಬಿವುಲ್ಲಾ ಬೇಗ್, ಖಜಾಂಚಿ ಪ್ರಕಾಶ್ ಮಳ್ಳುಕೆರೆ, ಮಹಿಳಾ ಪದಾಧಿಕಾರಿಗಳಾದ ಮಮತಾ ಪಿ, ರೂಪ ಸಂತೋಷ್, ಯಶೋಧ ನಾಗರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248